ಪ್ರಜಾವಾಣಿ

## ಗುದ್ಲೆಪ್ಪ ಹಳ್ಳಿಕೇರಿ ಸೇವಾ ಗೌರವ ಪ್ರಶಸ್ತಿ ಪ್ರದಾನ: ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ವಿಷಾದ

# ಹಣ, ಮದ್ಯ ಕೊಟ್ಟು ಮತ ಪಡೆಯುವ ಸ್ಥಿತಿ

ಪ್ರಜಾವಾಣಿ ವಾರ್ತೆ

**ಗುತ್ತಲ:** 'ಚುನಾವಣೆ ಸಂದರ್ಭದಲ್ಲಿ ಹಣ, ಮದ್ಯ ಕೊಟ್ಟು ಮತ ಪಡೆಯುವಂತ ಸ್ಥಿತಿ ನಿರ್ಮಾಣವಾಗಿದೆ' ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ವಿಷಾದ ವ್ಯಕ್ತಪಡಿಸಿದರು.

ಹಾವೇರಿ ತಾಲ್ಲೂಕಿನ ಹೊಸರಿತ್ತಿ ಗ್ರಾಮದ ಗಾಂಧಿ ಗ್ರಾಮೀಣ ಗುರುಕುಲದಲ್ಲಿ ಗುರುವಾರ ಆಯೋಜಿಸಿದ್ದ ಗುದ್ಲೆಪ್ಪ ಹಳ್ಳಿಕೇರಿಯವರ 119ನೇ ಜಯಂತಿ ಮತ್ತು ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.



ಹಾವೇರಿ ತಾಲ್ಲೂಕಿನ ಹೊಸರಿತ್ತಿ ಗ್ರಾಮದ ಗಾಂಧಿ ಗ್ರಾಮೀಣ ಗುರುಕುಲದಲ್ಲಿ ಗುರುವಾರ ನಡೆದ ಗುದ್ಲೆಪ್ಪ ಹಳ್ಳಿಕೇರಿಯವರ 119ನೇ ಜಯಂತಿ ಸಮಾರಂಭದಲ್ಲಿ ಗುದ್ಲೆಪ್ಪ ಹಳ್ಳಿಕೇರಿ ಸೇವಾ ಗೌರವ ಪ್ರಶಸ್ತಿಯನ್ನು ಧಾರವಾಡದ ಸಾಹಿತಿ ಸಿದ್ದಲಿಂಗ ಪಟ್ಟಣಶೆಟ್ಟಿ ಮತ್ತು ಹೇಮಾ ಪಟ್ಟಣಶೆಟ್ಟಿ ದಂಪತಿಗೆ ಪ್ರದಾನ ಮಾಡಲಾಯಿತು

'ಈ ರೀತಿಯ ವ್ಯವಸ್ಥೆ ಸುಧಾರಣೆ ಆಗುವವರೆಗೆ ರಾಷ್ಟ್ರ ಮತ್ತು ರಾಜ್ಯ ಉದ್ಧಾರ ಆಗಲು ಸಾಧ್ಯವಿಲ್ಲ. ಹಿಂದಿನ ರಾಜಕಾರಣಕ್ಕೂ ಈಗಿನ ರಾಜಕಾರಣಕ್ಕೂ ತುಂಬಾ ವ್ಯತ್ಯಾಸವಿದೆ. ಗುದ್ಲೆಪ್ಪ ಹಳ್ಳಿಕೇರಿ ಅವರಂತ ಮಹಾನ ವ್ಯಕ್ತಿಗಳ ಮಾರ್ಗದರ್ಶನದಲ್ಲಿ ನಡೆದರೆ ಈ ದೇಶ ಉತ್ತಮ ರೀತಿಯಲ್ಲಿ ಮುನ್ನಡೆಯುತ್ತದೆ. ಇಲ್ಲದಿದ್ದರೆ ಕಷ್ಟದ ಹಾದಿಯಲ್ಲಿ ಮುನ್ನಡೆಯಬೇಕಾಗುತ್ತದೆ' ಎಂದು ಹೇಳಿದರು.

'ಪಾಲಕರು ಮಕ್ಕಳನ್ನು ಕಾರ್ಯಕ್ರಮಕ್ಕೆ ಕರೆದುಕೊಂಡು ಹೋಗುವಂತ ಕೆಲಸ ಮಾಡಿದರೆ ಕಾರ್ಯಕ್ರಮದಲ್ಲಿ ದೇಶದ ಮಹಾನ ನಾಯಕರ ಪರಿಚಯ ಮಾಡಿಕೊಡುವಂತ ಕೆಲಸ ಮಾಡಬೇಕು. ಗುದ್ಲೆಪ್ಪನವರು ಸಭಾಪತಿ ಆದ ಸಂದರ್ಭದಲ್ಲಿ ಉತ್ತಮ ರೀತಿಯಲ್ಲಿ ತಮ್ಮ ಕರ್ತವ್ಯವನ್ನು ನಿರ್ವಹಿಸಿದ್ದಾರೆ. ಹಲವಾರು ಹೋರಾಟಗಳು ಮತ್ತು ಚಳವಳಿ ನಡೆಸಿ ಜೈಲುವಾಸ ಅನುಭವಿಸಿ ಮಹಾನ್ ವ್ಯಕ್ತಿಗಳಾಗಿ ಲಕ್ಷಾಂತರ ಮಕ್ಕಳಿಗೆ ಆಸರೆಯಾಗುವಂತ ಗುರುಕುಲ ನಿರ್ಮಿಸಿದರು' ಎಂದು ಹೇಳಿದರು.

ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಸಾಹಿತಿ ಸಿದ್ದಲಿಂಗ ಪಟ್ಟಣಶೆಟ್ಟಿ, 'ಜಾತಿಭೇದ ಎನ್ನದೆ ಹಲವಾರು ಜನರ ಸಮಸ್ಯೆಗಳನ್ನು ಬಗೆಹರಿಸಲು ನಿರಂತರವಾಗಿ ಶ್ರಮಿಸಿದ ಏಕೈಕ ವ್ಯಕ್ತಿ ಗುದ್ಲೆಪ್ಪನವರು, ಈಗಿನ ಕಾಲದಲ್ಲಿ

> **ಸಮಾಜ ತಿದ್ದುವಂತ ಮಕ್ಕಳಿಗೆ ಪಾಠ ಮಾಡುವಂತ ಶಿಕ್ಷಕರು ಮತ್ತು ಬುದ್ಧಿ ಜೀವಿಗಳು ಹಣ, ಮದ್ಯಕ್ಕೆ ಆಸೆಪಟ್ಟು ಮತ ನೀಡಿದರೆ ಇನ್ನು ಜನಸಾಮಾನ್ಯರೆ ಗತಿ ಏನು?**
>
> **ಬಸವರಾಜ ಹೊರಟ್ಟಿ**
> ವಿಧಾನ ಪರಿಷತ್ ಸಭಾಪತಿ

ಜಾತಿ, ಹಣ, ಲಂಚಕ್ಕೆ ಕೈಚಾಚಿ ಸಮಸ್ಯೆಗಳನ್ನು ಬಗೆಹರಿಸುವವರ ಸಂಖ್ಯೆ ಜಾಸ್ತಿಯಾಗಿದೆ' ಎಂದು ಹೇಳಿದರು.

'ಬಡವರ ಬಗ್ಗೆ ಕಾಳಜಿ ಹೊಂದಿದವರು ಹಣ, ಆಸ್ತಿ, ಅಂತಸ್ತಿಗೆ ಮರಳಾಗದ ಗುದ್ಲೆಪ್ಪನವರು, ಶಿಕ್ಷಣದ ಬಗ್ಗೆ ಹೆಚ್ಚು ಮತ್ತು ನೀಡಿ ಇಂತಹ ಶಿಕ್ಷಣ ಸಂಸ್ಥೆ ಬೆಳೆಸಿದರು' ಎಂದರು.

ಧಾರವಾಡ ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ.ಪಿ.ಎಲ್. ಪಾಟೀಲ ಮಾತನಾಡಿ, ಗುರುಕುಲದಲ್ಲಿ ಶಿಕ್ಷಣ ಪಡೆದವರು ಪುಣ್ಯವಂತರು, ಮಕ್ಕಳಿಗೆ ಪಾಲಕರು ಉತ್ತಮ ಶಿಕ್ಷಣ ನೀಡಿ ವಿಜ್ಞಾನ ವಿಭಾಗದಲ್ಲಿ ಜೀವಶಾಸ್ತ್ರ ವಿಷಯವನ್ನು ಮಕ್ಕಳು ಆಯ್ದುಕೊಳ್ಳಬೇಕು. ರೈತರ ಮಕ್ಕಳಿಗೆ ಕೃಷಿ ವಿಶ್ವವಿದ್ಯಾಲಯದಲ್ಲಿ ಪ್ರವೇಶ ಪಡೆಯಲು ಶೇ 50 ರಿಯಾಯಿತಿ ಇದೆ. ಮಕ್ಕಳು ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಸಾಹಿತಿ ಸಿದ್ದಲಿಂಗ ಪಟ್ಟಣಶೆಟ್ಟಿ ಅವರು ಗುರುಕುಲದ ಅಭಿವೃದ್ಧಿಗೆ ₹1 ಲಕ್ಷ ಚೇಕ್ ನೀಡಿದರು.

ಮಾಜಿ ಸಂಸದ ಐ.ಜಿ. ಸನದಿ, ಡಾ.ಲಿಂಗರಾಜ ಅಂಗಡಿ ಮಾತನಾಡಿದರು. ವೀರಣ್ಣ ರಾಜೂರ ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಅತಿಥಿಗಳನ್ನು ಸನ್ಮಾನಿಸಲಾಯಿತು. ಗುದ್ಲೆಪ್ಪ ಹಳ್ಳಿಕೇರಿ ಅವರ ದರ್ಶನ-ಪ್ರದರ್ಶನವನ್ನು ಉದ್ಘಾಟಿಸಲಾಯಿತು. ಗುದ್ಲೆಪ್ಪನವರ ಸಮಾಧಿಗೆ ಪುಷ್ಪಾರ್ಪಣೆ ಮಾಡಲಾಯಿತು. ಗುದ್ಲೆಪ್ಪ ಹಳ್ಳಿಕೇರಿ ಪ್ರತಿಷ್ಠಾನದ ಧರ್ಮದರ್ಶಿ ವೀರಣ್ಣ ಚಕ್ಕಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಗುದ್ಲೇಶ ಹಳ್ಳಿಕೇರಿ, ಗಿರೀಶ ಅಂಕಲಕೋಟಿ, ರಮೇಶ ಏಕಬೋಟೆ, ಆರ್.ಎಸ್.ಪಾಟೀಲ, ಶಶಿ ಸಾಲಿ ಇದ್ದರು.